**<u>ಪ್ರಧಾನ ಸಿವಿಲ್ ಮತ್ತು ಜೆಎಮ್‌ಎಫ್ ಸಿ ನ್ಯಾಯಾಧೀಶರ ನ್ಯಾಯಾಲಯ, ಯಾದಗಿರಿ.</u>**

ಸಿಸಿ ನಂ.**550/2025**

ಪಿರ್ಯಾದಿ : ಶ್ರೀಮತಿ ದಾನೇಶ್ವರಿ ಎಂ ಗಂಡ ಬಸವರಾಜ ಮಡಿವಾಳ, ವಯಸ್ಸುಃ 27 ವರ್ಷ, ಉಃ ಒಕ್ಕಲುತನ ಮತ್ತು ವ್ಯಾಪಾರ, ಸಾಃ ಯಾದಗಿರಿ, ತಾಃ ಮತ್ತು ಜಿಃ ಯಾದಗಿರಿ.

ಆರೋಪಿ : ಶ್ರೀ ಮೊಹ್ಮದ್ ರೆಹನ್ ಎಕ್ಬಾಲ್ ತಂದೆ ಮೊಹ್ಮದ್ ರಫೀಕ್ ಅಹ್ಮದ್, ಸಾಃ ಮನೆ ನಂ.1-2-32, ಚೌಕ ಮಸೀದ್ ಹತ್ತಿರ, ಹುಸೇನ್ ಅಲಮ ಏರಿಯಾ, ಯಾದಗಿರಿ, ತಾಃ ಮತ್ತು ಜಿಃ ಯಾದಗಿರಿ.

<u>ದಂಡ ಪ್ರಕ್ರಿಯಾ ಸಂಹಿತೆ ಕಲಂ **313** ರ ಅಡಿಯಲ್ಲಿ ಆರೋಪಿತನ ಹೇಳಿಕೆ</u>

ಪ್ರಶ್ನೆಃ1ಃ ನೀವು ದೂರುದಾರರ ವಿಚಾರಣೆಯನ್ನು ಕೇಳಿದ್ದೀರಾ?

ಆರೋಪಿಯ ಉತ್ತರಃ

ಪ್ರಶ್ನೆ2 : ಪ್ರಾಸಾ-1 ಶ್ರೀಮತಿ ದಾನೇಶ್ವರಿ ಎಂ ಗಂಡ ಬಸವರಾಜ ಮಡಿವಾಳ ಇವರು ಪಿರ್ಯಾದಿದಾರರಾಗಿದ್ದು, ತಮ್ಮ ಮುಖ್ಯ ವಿಚಾರಣೆಯಲ್ಲಿ ಪಿರ್ಯಾದಿದಾರರು ಮತ್ತು ಆಪಾದಿತನಾದ ನೀವು ಪರಿಚಯಸ್ಥರಾಗಿರುತ್ತೀರಿ ಹಾಗೂ ಸದರಿ ಪರಿಚಯದ ಆಧಾರದ ಮೇಲೆ ನೀವು ದೂರುದಾರರಿಂದ ದಿನಾಂಕ 12.01.2025 ರಂದು ರೂ.9,00,000/- ಗಳನ್ನು ಸಾಲಪಡೆದಿರುತ್ತೀರಿ ಎಂದು ನುಡಿದಿದ್ದಾರೆ. ಇದರ ಬಗ್ಗೆ ನೀವೇನು ಹೇಳುವಿರಿ?

ಆರೋಪಿಯ ಉತ್ತರಃ

ಪ್ರಶ್ನೆಃ 3 ಃ ಪ್ರಾಸಾ 1 ಇವರು ತಮ್ಮ ಮುಖ್ಯ ವಿಚಾರಣೆಯಲ್ಲಿ ಮುಂದುವರೆದು, ಸದರಿ ಹಣವನ್ನು ಮರುಪಾತಿಗಾಗಿ ಆಪಾದಿತನಾದ ನೀವು ಖಾತೆ ಹೊಂದಿರುವ ಎಕ್ಸಿಸ್ ಬ್ಯಾಂಕ್, ಯಾದಗಿರಿ ಶಾಖೆಗೆ ಸೇರಿದ 061712 ಸಂಖ್ಯೆಯ ಚೆಕ್ ನಲ್ಲಿ ರೂ. 9,00,000/- ಹಾಗೂ ದಿನಾಂಕ 06.02.2025 ಎಂದು ನಮೂದು ಮಾಡಿ ಬ್ಯಾಂಕಿಗೆ ಹಾಜರುಪಡಿಸಿ ನಗದೀಕರಿಸಿಕೊಳ್ಳುವಂತೆ ನೀಡಿದ್ದೀರಿ ಎಂದು ನುಡಿದಿದ್ದಾರೆ. ಇದರ ಬಗ್ಗೆ ನೀವೇನು ಹೇಳುವಿರಿ?

ಆರೋಪಿಯ ಉತ್ತರಃ

ಪ್ರಶ್ನೆ 4ಃ ಪ್ರಾಸಾ 1 ಇವರು ತಮ್ಮ ಮುಖ್ಯ ವಿಚಾರಣೆಯಲ್ಲಿ ಮುಂದುವರೆದು, ಸದರಿ ಚೆಕ್‌ನ್ನು ನಗದೀರಣಕ್ಕಾಗಿ ದಿನಾಂಕ 07.02.2025 ರಂದು ತಾವು ಖಾತೆ ಹೊಂದಿರುವ ಕರ್ನಾಟಕ ಗ್ರಾಮೀಣ ಬ್ಯಾಂಕ್, ಯಾದಗಿರಿ ಶಾಖೆಯ ಮೂಲಕ ಹಾಜರು ಪಡಿಸಿದಾಗ, “Funds insufficient”

ಎಂಬ ಹಿಂಬರಹದೊಂದಿಗೆ ಅಮಾನ್ಯಗೊಂಡು ಚೆಕ್ಕನ್ನು ದಿನಾಂಕ 10.02.2024 ರಂದು ವಾಪಸ್ಸು ನೀಡಿರುತ್ತಾರೆ ಎಂದು ನುಡಿದಿದ್ದಾರೆ. ಇದರ ಬಗ್ಗೆ ನೀವೇನು ಹೇಳುವಿರಿ?

ಆರೋಪಿಯ ಉತ್ತರಃ

ಪ್ರಶ್ನೆ 5ಃ ಪ್ರಾಸಾ 1 ಇವರು ತಮ್ಮ ಮುಖ್ಯ ವಿಚಾರಣೆಯಲ್ಲಿ ಮುಂದುವರೆದು, ನಂತರ ಪಿರ್ಯಾದುದಾರರು ತಮ್ಮ ವಕೀಲರ ಮೂಲಕ ದಿನಾಂಕ 19.02.2024 ರಂದು ಆಪಾದಿತನಾದ ನಿಮ್ಮ ವಿಳಾಸಕ್ಕೆ ನೊಂದಾಯಿತ ಅಂಚೆಯ ಮೂಲಕ ತಿಳುವಳಿಕೆ ಪತ್ರವನ್ನು ಕಳುಹಿಸಿದ್ದು, ಸದರಿ ನೋಟಿಸ್ ದಿನಾಂಕ 20.02.2025 ರಂದು ಜಾರಿಯಾಗಿರುತ್ತದೆ. ನಿಮ್ಮ ಖಾತೆಯಲ್ಲಿ ಸಾಕಷ್ಟು ಹಣ ಇಲ್ಲದಿದ್ದರು ದೂರುದಾರರಿಗೆ ಚೆಕ್‌ನ್ನು ನೀಡಿ ನಂತರ ಚೆಕ್ ಮೊತ್ತವನ್ನು ಪಾವತಿ ಮಾಡದೆ ಇರುವುದರ ಮೂಲಕ ವರ್ಗಾವಣೀಯ ಲಿಖಿತ ಕಾಯ್ದೆ ಕಲಂ 138 ರಡಿ ಅಪರಾಧ ಎಸಗಿದ್ದೀರಿ ಎಂದು ನುಡಿದಿದ್ದಾರೆ. ಇದರ ಬಗ್ಗೆ ನೀವೇನು ಹೇಳುವಿರಿ?

ಆರೋಪಿಯ ಉತ್ತರಃ

ಪ್ರಶ್ನೆ **6**ಃ ಈ ಪ್ರಕರಣದ ಬಗ್ಗೆ ನೀವು ಏನಾದರೂ ಹೇಳಲು ಇಚ್ಚಿಸುತ್ತೀರಾ?

ಆರೋಪಿಯ ಉತ್ತರಃ

ಪ್ರಶ್ನೆ **7** ಃ ನಿಮ್ಮ ಪರ ಯವುದಾದರೂ ಸಾಕ್ಷಿಯನ್ನು ವಿಚಾರಣೆ ಮಾಡುತ್ತೀರಾ?

ಆರೋಪಿಯ ಉತ್ತರಃ

(ಮೇಲ್ಕಂಡಂತೆ ಆಪಾದಿತರಿಗೆ ತಿಳಿದ ಭಾಷಯಲ್ಲಿ ತೆರೆದ ನ್ಯಾಯಾಲಯದಲ್ಲಿ ಓದಿ ಹೇಳಿ ಪ್ರಶ್ನಿಸಿ, ಅವರು ನೀಡಿದ ಹೇಳಿಕೆಯನ್ನು ಪಡೆದುಕೊಳ್ಳಲಾಯಿತು.)

ದಿನಾಂಕಃ 22.01.2026
ಸ್ಥಳಃ ಯಾದಗಿರಿ

ಪ್ರಧಾನ ಸಿವಿಲ್ ಮತ್ತು ಜೆ ಎಂ ಎಫ ಸಿ
ನ್ಯಾಯಾಧೀಶರು,ಯಾದಗಿರಿ.